ಕರ್ನಾಟಕ ಸರ್ಕಾರ
ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ,
ಮಲ್ಲೇಶ್ವರಂ 6ನೇ ಅಡ್ಡರಸ್ತೆ, ಬೆಂಗಳೂರು-560003
E-Mail Id: dpioekseeb@gmail.com Phone No: 080-23460525

ಸಂಖ್ಯೆ: ಕ್ಯೂ5/ಕೆ.ಓ.ಎಸ್/ಪೂರಕ ಪರೀಕ್ಷೆ/ಡಿಸೆಂಬರ್ 2020/ /2020-21 ದಿನಾಂಕ:23.11.2020

ಅಧಿಸೂಚನೆ

ವಿಷಯ: ಡಿಸೆಂಬರ್ 2020ನೇ ಮಾಹೆಯಲ್ಲಿ ಕರ್ನಾಟಕ ಮುಕ್ತ ಶಾಲೆ-ಕೆ.ಓ.ಎಸ್ ಪೂರಕ ಪರೀಕ್ಷೆ ನಡೆಸುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ:ಇಡಿ.73.ಎಸ್.ಎಲ್.ಬಿ.2006; ದಿನಾಂಕ:06.09.2006.
2. ಸರ್ಕಾರದ ಆದೇಶ ಸಂಖ್ಯೆ: ಇಡಿ.209.ಎಸ್.ಎಲ್.ಬಿ.2013; ದಿನಾಂಕ:06.12.2014.

****

ಸೆಪ್ಟಬಂರ್-2020ರಲ್ಲಿ ಕರ್ನಾಟಕ ಮುಕ್ತ ಶಾಲೆ-ಕೆ.ಓ.ಎಸ್ ಮುಖ್ಯ ಪರೀಕ್ಷೆಯನ್ನು ಬರೆದು ಅನುತ್ತೀರ್ಣರಾದ ಅಭ್ಯರ್ಥಿಗಳಿಗೆ ಹಾಗೂ ಅದಕ್ಕೂ ಪೂರ್ವದಲ್ಲಿ ಪ್ರಥಮ ಬಾರಿಗೆ ಮಾರ್ಚ್ 2018 ಮತ್ತು ತದ ನಂತರ ಸಾಲುಗಳಲ್ಲಿ ಪರೀಕ್ಷೆ ತೆಗೆದುಕೊಂಡು ಅನುತ್ತೀರ್ಣರಾಗಿರುವ ಅಭ್ಯರ್ಥಿಗಳಿಗೆ ಡಿಸೆಂಬರ್ 2020ರಲ್ಲಿ ದಿನಾಂಕ:28.12.2020 ರಿಂದ ದಿನಾಂಕ:06.01.2021 ರವರೆಗೆ ಕರ್ನಾಟಕ ಮುಕ್ತ ಶಾಲೆ-ಕೆ.ಓ.ಎಸ್ ಪೂರಕ ಪರೀಕ್ಷೆಯನ್ನು ನಡೆಸಲು ನಿರ್ಧರಿಸಲಾಗಿದೆ. ಪರೀಕ್ಷಾ ವೇಳಾಪಟ್ಟಿಯನ್ನು ಇದರೊಂದಿಗೆ ಲಗತ್ತಿಸಿದೆ. ಈ ಬಾರಿ ಪೂರಕ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಪರೀಕ್ಷಾ ಪ್ರಕ್ರಿಯೆಗಳನ್ನು Online ವ್ಯವಸ್ಥೆಗೆ ತರಲಾಗುತ್ತಿದೆ. ಈ ಹಿನ್ನಲೆಯಲ್ಲಿ ಕೆ.ಓ.ಎಸ್ ಪೂರಕ ಪರೀಕ್ಷೆಗೆ Online ಮೂಲಕ ಅರ್ಜಿ ಆಹ್ವಾನಿಸಲಾಗುತ್ತಿದೆ. ಈ ಪರೀಕ್ಷೆಗೆ Online ಮೂಲಕ ನೋಂದಾಯಿಸಲು ಅನುತ್ತೀರ್ಣ ಅಭ್ಯರ್ಥಿಗಳು ಮಾತ್ರ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಿರುತ್ತಾರೆ.

1. **ಸರ್ಕಾರದ ಆದೇಶ ಸಂಖ್ಯೆ:ಇಡಿ.209.ಎಸ್.ಎಲ್.ಬಿ.2013; ದಿನಾಂಕ:06.12.2014ರನ್ವಯ, ಮಾರ್ಚ್ 2018ರ ಪೂರ್ವದಲ್ಲಿ ಪರೀಕ್ಷೆ ತೆಗೆದುಕೊಂಡ ಅನುತ್ತೀರ್ಣ ವಿದ್ಯಾರ್ಥಿಗಳು ಡಿಸೆಂಬರ್ 2020ರ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಯಮದಲ್ಲಿ ಅವಕಾಶವಿರುವುದಿಲ್ಲ.**
2. **ಪ್ರಥಮ ಬಾರಿಗೆ ಮಾರ್ಚ್ 2018ರ ಪರೀಕ್ಷೆ ತೆಗೆದುಕೊಂಡ ವಿದ್ಯಾರ್ಥಿಗಳಿಗೆ ಆರು ಪ್ರಯತ್ನಗಳ ಮಿತಿ ಡಿಸೆಂಬರ್ 2020ಕ್ಕೆ ಮುಕ್ತಾಯವಾಗುತ್ತದೆ. ಆದ್ದರಿಂದ ಆಯಾ ಕರ್ನಾಟಕ ಮುಕ್ತ ಶಾಲೆ-ಕೆ.ಓ.ಎಸ್ ಕಲಿಕಾ ಕೇಂದ್ರಗಳಲ್ಲಿ ಇಂತಹ ವಿದ್ಯಾರ್ಥಿಗಳಿದ್ದಲ್ಲಿ ಅಂತಿಮ ಕಾಲಾವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ತಿಳಿಸಿದೆ.** ಇಲ್ಲವಾದಲ್ಲಿ ಮುಂದೆ ಪರೀಕ್ಷೆ ಬರೆಯುವ ಸಂದರ್ಭಗಳಲ್ಲಿ ಹೊಸದಾಗಿ ಕರ್ನಾಟಕ ಮುಕ್ತ ಶಾಲೆ-ಕೆ.ಓ.ಎಸ್ ಕಲಿಕಾ ಕೇಂದ್ರದಲ್ಲಿ ದಾಖಲಾಗಿ ಎಲ್ಲಾ ವಿಷಯಗಳಿಗೂ ಹೊಸ ಅಭ್ಯರ್ಥಿಯಾಗಿ ಪರೀಕ್ಷೆ ಬರೆಯಬೇಕಾಗುತ್ತದೆ.

ಅರ್ಜಿಗಳನ್ನು ಸಲ್ಲಿಸಲು ಕಲಿಕಾ ಕೇಂದ್ರದ ಮುಖ್ಯಸ್ಥರು ಪಾಲಿಸಬೇಕಾದ ಸೂಚನೆಗಳು:

(ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಭರ್ತಿ ಮಾಡಲು ಅನುಕೂಲವಾಗುವಂತೆ FlowChart ನೀಡಲಾಗಿದ್ದು ಅದನ್ನು ಕಡ್ಡಾಯವಾಗಿ ಓದಿಕೊಳ್ಳುವುದು.)

1 ಡಿಸೆಂಬರ್–2020 ಕೆ.ಓ.ಎಸ್ ಪೂರಕ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳ ನೊಂದಣಿ ಮಾಹಿತಿಯನ್ನು ಮಂಡಳಿಯ ಜಾಲತಾಣದಲ್ಲಿ Login/Other Exams/KOS Examination Login ನಲ್ಲಿ ಈ ಹಿಂದೆ ನೀಡಿರುವ ನೋಂದಣಿ ಸಂಖ್ಯೆಯನ್ನು ನಮೂದಿಸುವ ಮೂಲಕ ಮಾಹಿತಿಗಳನ್ನು Upload ಮಾಡಲು ಸೂಚಿಸಿದೆ.

2 ಕೆ.ಓ.ಎಸ್ ಪೂರಕ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳ ನೋಂದಣಿ ಸಂಖ್ಯೆಯನ್ನು ನಮೂದಿಸಿದಾಗ ಅಭ್ಯರ್ಥಿಗಳ (ಎಂ.ಎಸ್.ಎ) ಪೂರಕ ಪರೀಕ್ಷೆಯ ಅರ್ಜಿಗಳು **AUTO FETCH** ಆಗುತ್ತವೆ.

3 ಪತ್ರ ವ್ಯವಹಾರಕ್ಕೆ ಅನುಕೂಲಕರವಾದ ಅಂಚೆ ವಿಳಾಸ, ಮೊಬೈಲ್ ಫೋನ್ ಸಂಖ್ಯೆ ಹಾಗೂ E-Mail ವಿಳಾಸವನ್ನು ಭರ್ತಿ ಮಾಡಲು ಅವಕಾಶ ನೀಡಲಾಗುತ್ತದೆ.

4 **ಪರೀಕ್ಷಾ ಅರ್ಜಿಗಳನ್ನು ಮಂಡಳಿಯ ಜಾಲತಾಣದಲ್ಲಿ ಸಂಸ್ಥೆಯ ಲಾಗಿನ್ ಮೂಲಕ ಸಲ್ಲಿಸುವ ಸಮಯದಲ್ಲಿ ವಿದ್ಯಾರ್ಥಿಗಳ ನೇರಭಂಗಿಯ ಭಾವಚಿತ್ರ 60 ರಿಂದ 80 KB ಹಾಗೂ ಸಹಿಯನ್ನು 20 ರಿಂದ 50 KB JPEG ನಮೂನೆಯಲ್ಲಿ ಅಪ್‌ಲೋಡ್ ಮಾಡುವುದು ಕಡ್ಡಾಯ.**

5 **ಭಾವಚಿತ್ರವನ್ನು ಮಾತ್ರವೇ ಸ್ಕ್ಯಾನ್ ಮಾಡಿಕೊಂಡು ಅಪ್ ಲೋಡ್ ಮಾಡಬೇಕೇ ಹೊರತು ಇಡೀ ಪೇಪರ್ ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡುವಂತಿಲ್ಲ.**

6 ಆನ್‌ಲೈನ್‌ನಲ್ಲಿ ವಿದ್ಯಾರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡುವಾಗ ನೈಜ ವಿದ್ಯಾರ್ಥಿಯ ಬದಲು ಬೇರೆ ವಿದ್ಯಾರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡಿದರೆ ಅಂತಹ ಸಂಸ್ಥೆಯ ಮುಖ್ಯಸ್ಥರ/ಸಮನ್ವಯಾಧಿಕಾರಿಗಳ ಮೇಲೆ ನಿಯಮಾನುಸಾರ ಕಠಿಣ ಕ್ರಮ ಜರುಗಿಸಲಾಗುವುದು. ಇಂತಹ ದೋಷಗಳನ್ನು ಪರಿಶೀಲಿಸದೆ, ಖಾತ್ರಿಪಡಿಸಿಕೊಳ್ಳದೆ, ಯಥಾವತ್ತಾಗಿ ಅನುಮೋದಿಸಿದರೆ ಕಲಿಕಾ ಕೇಂದ್ರದವರ ಮೇಲೆ ನಿಯಮಾನುರೀತ್ಯಾ ಕ್ರಮಕ್ಕೆಗೊಳ್ಳಲಾಗುವುದು.

7 ಕಲಿಕಾ ಕೇಂದ್ರದ ಮುಖ್ಯಸ್ಥರು ಲಾಗಿನ್‌ನಲ್ಲಿ ನಾಮಯಾದಿ ಪಟ್ಟಿಯನ್ನು (Nominal Roll) Down load ಮಾಡಿಕೊಂಡು ಪರಿಶೀಲಿಸಿ ಶುಲ್ಕ ಪಾವತಿಸಿದ ಮೂಲ ಚಲನ್‌ನೊಂದಿಗೆ ಮಂಡಳಿಗೆ ಸಲ್ಲಿಸುವುದು.

8 ಮೇಲಿನ ಎಲ್ಲಾ ನಿಯಮಗಳನ್ನು ಸಂಬಂಧಪಟ್ಟ ಕಲಿಕಾ ಕೇಂದ್ರದ ಮುಖ್ಯಸ್ಥರು ತಪ್ಪದೇ ಪಾಲಿಸಲು ತಿಳಿಸಿದೆ. ನಿಯಮಗಳನ್ನು ಪಾಲಿಸದಿದ್ದಲ್ಲಿ ಮುಂದಿನ ಆಗುಹೋಗುಗಳಿಗೆ ಕಲಿಕಾ ಕೇಂದ್ರದ ಮುಖ್ಯಸ್ಥರನ್ನೇ ಜವಾಬ್ದಾರರನ್ನಾಗಿ ಮಾಡಲಾಗುವುದು.

3. **ಅನುತ್ತೀರ್ಣ ವಿದ್ಯಾರ್ಥಿಗಳು ಪಾವತಿಸಬೇಕಾಗಿರುವ ಪರೀಕ್ಷಾ ಶುಲ್ಕದ ವಿವರಗಳು:**

ಪರೀಕ್ಷಾ ಶುಲ್ಕದ ವಿವರ	ಶುಲ್ಕದ ಮೊತ್ತ ರೂ.ಗಳಲ್ಲಿ
ಅ) ಒಂದು ವಿಷಯಕ್ಕೆ	360–00
ಆ) ಎರಡು ವಿಷಯಗಳಿಗೆ	600–00
ಇ) ಮೂರು ವಿಷಯಗಳಿಗೆ	840–00
ಈ) ನಾಲ್ಕು ಮತ್ತು ಅದಕ್ಕೂ ಮೇಲ್ಪಟ್ಟ ವಿಷಯಗಳಿಗೆ	1416–00

4. ಅಭ್ಯರ್ಥಿಗಳ ಪರೀಕ್ಷಾ ಶುಲ್ಕ ಪಾವತಿಸುವ ವಿಧಾನ

- ಅಭ್ಯರ್ಥಿಗಳ ಪರೀಕ್ಷಾ ಅರ್ಜಿಯನ್ನು ಕಲಿಕಾ ಕೇಂದ್ರದ ಮುಖ್ಯಸ್ಥರು ಮಂಡಳಿಯ ಜಾಲತಾಣದಲ್ಲಿ, ತಮ್ಮ ಸಂಸ್ಥೆಯ Login ಮೂಲಕ Upload ಮಾಡಬೇಕು. ನಿಗದಿಪಡಿಸಿದ ಅವಧಿಯೊಳಗೆ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪೂರ್ಣಗೊಂಡ ನಂತರ ಸಂಸ್ಥೆವಾರು ಪರೀಕ್ಷಾ ಶುಲ್ಕ ಪಾವತಿಗೆ ಸಂಬಂಧಪಟ್ಟಂತೆ ಆನ್‌ಲೈನ್‌ನಲ್ಲಿ ಚಲನ್ ಜನರೇಟ್ ಮಾಡುವ ವ್ಯವಸ್ಥೆ ಮಾಡಲಾಗಿದೆ. ಸದರಿ ಚಲನ್ ಅನ್ನು Login ನಿಂದ ಡೌನ್‌ಲೋಡ್ ಮಾಡಿಕೊಂಡು ಅದರಲ್ಲಿ ನಮೂದಿಸಿರುವ